# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 726 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಕೆ ಎಸ್ ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22.07.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ ಒಂದು ವರ್ಷದಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ನೀಡಲಾಗಿದೆ; (ಜಿಲ್ಲಾವಾರು ವಿವರ ಒದಗಿಸುವುದು) | 2023-24ನೇ ಸಾಲಿನಲ್ಲಿ ಆದ್ಯತಾ ಪಡಿತರ ಚೀಟಿ ಕೋರಿ ಸಲ್ಲಿಸಿದ್ದ ಅರ್ಜಿಗಳಲ್ಲಿ ಒಟ್ಟು 62,595 ಅರ್ಜಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ.<br>ಜಿಲ್ಲಾವಾರು ವಿವರಗಳನ್ನು ಅನುಬಂಧ-01 ರಲ್ಲಿ ಒದಗಿಸಲಾಗಿದೆ. |
| ಆ | ಕಳೆದ ಒಂದು ವರ್ಷದಲ್ಲಿ ಎಷ್ಟು ಬಿ.ಪಿ.ಎಲ್ ಕಾರ್ಡ್‌ಗಳನ್ನು ರದ್ದುಪಡಿಸಲಾಗಿದೆ; ರದ್ದುಪಡಿಸಲು ಕಾರಣವೇನು; (ವಿವರ ಒದಗಿಸುವುದು) | ಪಡಿತರ ಚೀಟಿಯ ದುರುಪಯೋಗವನ್ನು ತಡೆಗಟ್ಟಲು ರಾಜ್ಯ ಸರ್ಕಾರವು ರೂಪಿಸಿರುವ ಮಾನದಂಡಗಳಿಗೆ ವಿರುದ್ಧವಾಗಿ ಅಂತ್ಯೋದಯ ಅನ್ನ ಮತ್ತು ಆದ್ಯತಾ ಪಡಿತರ ಚೀಟಿಗಳನ್ನು ಪಡೆದುಕೊಂಡವರನ್ನು ಪತ್ತೆ ಹಚ್ಚುವ ಕೆಲಸವನ್ನು ನಿರಂತರವಾಗಿ ಮಾಡಲಾಗುತ್ತಿದೆ. |
| ಇ | ಬಡವರಿಗೆ ಬಿ.ಪಿ.ಎಲ್ ಕಾರ್ಡ್ ಪಡೆಯುವುದಕ್ಕೆ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಬಿ.ಪಿ.ಎಲ್ ಕಾರ್ಡ್ ಪಡೆಯಲು ಇರುವ ಮಾನದಂಡಗಳೇನು? (ವಿವರ ನೀಡುವುದು) | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಈ ಕೆಳಕಂಡ (ಅನರ್ಹತೆಯನ್ನಾಧರಿಸಿ ಹೊರಗಿಡುವ) ಮಾನದಂಡಗಳನ್ನು ಜಾರಿಯಲ್ಲಿರುತ್ತವೆ.<br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು |

| | | |
|---|---|---|
| | | ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಮೇಲಿನ ಮಾನದಂಡಗಳಿಗೆ ವಿರುದ್ಧವಾಗಿ ಪಡಿತರ ಚೀಟಿ ಪಡೆದಿರುವ ವಿವರಗಳನ್ನು ಪರಿಶೀಲಿಸಿ ಅಂತ್ಯೋದಯ ಅನ್ನ ಮತ್ತು ಆದ್ಯತಾ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳಾಗಿ ಪರಿವರ್ತಿಸಿ ಹಾಗೂ ಅನರ್ಹರಿಂದ 2020-21ನೇ ಸಾಲಿನಿಂದ ಇಲ್ಲಿಯವರೆವಿಗೂ ಒಟ್ಟು 3,41,632 ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದ್ದು ಇವರಿಂದ ಒಟ್ಟು ರೂ. 13,75,20,710 ದಂಡ ವಸೂಲಿ ಮಾಡಲಾಗಿರುತ್ತದೆ. |

ಆನಾಸ 227 ಡಿಆರ್ಎ 2024 (ಇ-ಆಫೀಸ್)

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು

# ಅನುಬಂಧ-01

## ಶ್ರೀ. ಕೆ. ಎಸ್. ನವೀನ್ ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 726

| Sl. | District Name | PHH Applications Approved Count |
|---|---|---|
| 1 | 2 | 4 |
| 1 | BAGALKOTE | 1,138 |
| 2 | BALLARI | 167 |
| 3 | BANGALORE EAST | 600 |
| 4 | BANGALORE NORTH | 1,225 |
| 5 | BANGALORE SOUTH | 72 |
| 6 | BANGALORE WEST | 187 |
| 7 | BELAGAVI | 11,058 |
| 8 | BENGALURU | 2,484 |
| 9 | BENGALURU RURAL | 120 |
| 10 | BIDAR | 2,175 |
| 11 | CHAMARAJANAGARA | 1,466 |
| 12 | CHIKKABALLAPURA | 1,607 |
| 13 | CHIKKAMAGALURU | 1,016 |
| 14 | CHITRADURGA | 1,367 |
| 15 | DAKSHINA KANNADA | 926 |
| 16 | DAVANAGERE | 1,335 |
| 17 | DHARWAR | 4,555 |
| 18 | GADAG | 1,894 |
| 19 | HASSAN | 440 |
| 20 | HAVERI | 1,774 |
| 21 | KALABURAGI | 8,772 |
| 22 | KODAGU | 988 |
| 23 | KOLAR | 13 |
| 24 | KOPPAL | 1,845 |
| 25 | MANDYA | 461 |
| 26 | MYSURU | 2,171 |
| 27 | RAICHUR | 1,988 |
| 28 | RAMANAGARA | 157 |
| 29 | SHIVAMOGGA | 69 |
| 30 | TUMAKURU | 1,850 |
| 31 | UDUPI | 1,989 |
| 32 | UTTARA KANNADA | 3,798 |
| 33 | VIJAYANAGARA | 1,267 |
| 34 | VIJAYAPURA | 312 |
| 35 | YADGIR | 1,309 |
| | **TOTAL** | **62,595** |

ಅಪರ ಕಾರ್ಯದರ್ಶಿಗಳು (ಪ್ರ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಇಲಾಖೆ